ಜಿಲ್ಲಾ ಪಂಚಾಯತ್, ಕೋಲಾರ.

ಜಿಲ್ಲಾ ಆಯುಷ್ ಅಧಿಕಾರಿಗಳ ಕಛೇರಿ, ಎಸ್.ಎನ್.ಆರ್. ಆಸ್ಪತ್ರೆ ಆವರಣ, ಕೋಲಾರ-563101.

Email.ID: dao.kolar09@gmail.com Ph: 08152-220025

ಸಂಖ್ಯೆ: ಆಯುಷ್/ಕೋ/08/2021-22 ದಿನಾಂಕ: 17-08-2023

# ಅಧಿಸೂಚನೆ

ಕೋಲಾರ ಜಿಲ್ಲಾ ಆಯುಷ್ ಕಛೇರಿ ವ್ಯಾಪ್ತಿಯಲ್ಲಿ ಬರುವ ಕೇಂದ್ರ ಪುರಸ್ಕೃತ ಯೋಜನೆಯಡಿಯಲ್ಲಿ ಮೇಲ್ದರ್ಜೆಗೇರಿಸಲಾದ ಕೆಳಕಂಡ ಆಯುಷ್ ಆಸ್ಪತ್ರೆಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಖಾಲಿ ಇರುವ ತಜ್ಞ ವೈದ್ಯರು ಮತ್ತು ಅರೆ ವೈದ್ಯಕೀಯ ಸಿಬ್ಬಂದಿಗಳನ್ನು ಸಂಪೂರ್ಣ ತಾತ್ಕಾಲಿಕವಾಗಿ ಭರ್ತಿ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ.

| ಕ್ರ.ಸ | ಖಾಲಿ ಇರುವ ಸಂಸ್ಥೆಯ ಹೆಸರು | ಹುದ್ದೆಗಳ ಪದನಾಮ | ಹುದ್ದೆಗಳ ಸಂಖ್ಯೆ | ನಿಗದಿಪಡಿಸಿರುವ ಮೀಸಲಾತಿ | ಒಳ ಮೀಸಲಾತಿ | ಮಾಹೆಯಾನ ಸಂಚಿತ ವೇತನ | ಕನಿಷ್ಠ ವಿದ್ಯಾರ್ಹತೆ |
|---|---|---|---|---|---|---|---|
| 01 | ಸರ್ಕಾರಿ ಹೋಮಿಯೋಪತಿ ಆಸ್ಪತ್ರೆ, ಕೋಲಾರ | ಹೋಮಿಯೋಪತಿ ತಜ್ಞ ವೈದ್ಯರು | 01 | ಪರಿಶಿಷ್ಟ ಜಾತಿ | ಸಾಮಾನ್ಯ ಅಭ್ಯರ್ಥಿ | ರೂ.52,550/- + 5,000 (PG allowance) | ಹೋಮಿಯೋಪತಿಯಲ್ಲಿ ಸ್ನಾತಕೋತ್ತರ ಪದವಿ ಹೊಂದಿರಬೇಕು. ಹೋಮಿಯೋಪತಿಯಲ್ಲಿ ಸ್ನಾತಕೋತ್ತರ ಪದವಿ ಹೊಂದಿರುವ ಅಭ್ಯರ್ಥಿಗಳು ದೊರಕದಿದ್ದಲ್ಲಿ ಸದರಿ ವೈದ್ಯ ಪದ್ಧತಿಯಲ್ಲಿ ಪದವಿ ಹೊಂದಿರಬೇಕು ಹಾಗೂ ಕನಿಷ್ಠ 3 ವರ್ಷಗಳ ಅನುಭವ ಹೊಂದಿರಬೇಕು (ಸ್ನಾತಕೋತ್ತರ ಭತ್ಯೆ ರಹಿತ) |
| | | ಕ್ಷಾರಸೂತ್ರ ಅಟೆಂಡೆಂಟ್ | 01 | ಪರಿಶಿಷ್ಟ ಜಾತಿ | ಸಾಮಾನ್ಯ ಅಭ್ಯರ್ಥಿ | ರೂ. 18,500 | ಕನಿಷ್ಠ 10ನೇ ತರಗತಿ ವಿದ್ಯಾರ್ಹತೆ ಹಾಗೂ ಆಯುಷ್ ಆಸ್ಪತ್ರೆಗಳಲ್ಲಿ ಕರ್ತವ್ಯ ನಿರ್ವಹಿಸಿರುವ ಬಗ್ಗೆ ಅನುಭವ ಹೊಂದಿರತಕ್ಕದ್ದು |
| | | ಮಸಾಜಿಸ್ಟ್ | 01 | ಪರಿಶಿಷ್ಟ ಜಾತಿ | ಸಾಮಾನ್ಯ ಅಭ್ಯರ್ಥಿ | ರೂ. 18,500 | ಕನಿಷ್ಠ 7ನೇ ತರಗತಿ ವಿದ್ಯಾರ್ಹತೆ ಹಾಗೂ ಆಯುಷ್ಆಸ್ಪತ್ರೆ/ ಚಿಕಿತ್ಸಾಲಯಗಳಲ್ಲಿ ಮಸಾಜಿಸ್ಟ್ ಆಗಿ ಕರ್ತವ್ಯ ನಿರ್ವಹಿಸಿರುವ ಅನುಭವ ಹೊಂದಿರತಕ್ಕದ್ದು |
| 02 | ಸರ್ಕಾರಿ ಆಯುರ್ವೇದ ಆಸ್ಪತ್ರೆ, ಶ್ರೀನಿವಾಸಪುರ | ಆಯುರ್ವೇದ ತಜ್ಞ ವೈದ್ಯರು | 01 | ಪರಿಶಿಷ್ಟ ಜಾತಿ | ಸಾಮಾನ್ಯ ಅಭ್ಯರ್ಥಿ | ರೂ.52,550/- + 5,000 (PG allowance) | ಶಲ್ಯ ತಂತ್ರ/ಪಂಚಕರ್ಮ/ಕಾಯಚಿಕಿತ್ಸಾ ವಿಷಯಗಳಲ್ಲಿ ಸ್ನಾತಕೋತ್ತರ ಪದವಿ ಹೊಂದಿರಬೇಕು. |
| | | ಫಾರ್ಮಸಿಸ್ಟ್ | 02 | 1) ಪರಿಶಿಷ್ಟ ಜಾತಿ<br>2) ಸಾಮಾನ್ಯ ಅಭ್ಯರ್ಥಿ | ಸಾಮಾನ್ಯ ಅಭ್ಯರ್ಥಿ<br>ಸಾಮಾನ್ಯ ಅಭ್ಯರ್ಥಿ | ರೂ. 27,550 | ಎಸ್.ಎಸ್.ಎಲ್.ಸಿ ವಿದ್ಯಾರ್ಹತೆ ಮತ್ತು ಔಷಧಿ ವಿಜ್ಞಾನದಲ್ಲಿ ಡಿಪ್ಲೊಮಾ ಹೊಂದಿರಬೇಕು. |



17/8/23

## ನೇಮಕಾತಿಯು ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟಿರುತ್ತದೆ.

1. ಗುತ್ತಿಗೆ ನೇಮಕಾತಿಯು ಸಂಪೂರ್ಣ ತಾತ್ಕಾಲಿಕವಾಗಿದ್ದು, ದಿನಾಂಕ : 31-03-2024 ಕ್ಕೆ ಅಂತ್ಯಗೊಳ್ಳುತ್ತದೆ. ಆರ್ಥಿಕ ವರ್ಷ ಕೊನೆಯ ದಿನ ಮುಕ್ತಾಯವಾದ ನಂತರ ಒಂದು ದಿನ ವಿರಾಮ (Break) ನೀಡಿ ತರುವಾಯ ಮುಂದಿನ ಆರ್ಥಿಕ ವರ್ಷದ ಕೊನೆಯ ದಿನಾಂಕದವರೆಗೆ ಗುತ್ತಿಗೆ ಸೇವೆಯನ್ನು ಮುಂದುವರೆಸುವ ಬಗ್ಗೆ ಆಯುಷ್ ನಿರ್ದೇಶನಾಲಯ ಹಾಗೂ ಜಿಲ್ಲಾ ಆಯುಷ್ ಸಮಿತಿಯು ನಿರ್ಣಯಿಸಿದಂತೆ ಕ್ರಮಕೈಗೊಳ್ಳಲಾಗುವುದು.
2. ಕ.ನಾ.ಸೇ (ಸಾಮಾನ್ಯ ನೇಮಕಾತಿ) ನಿಯಮಗಳು ರೀತ್ಯ ನಿಗಧಿತ ವಯೋಮಿತಿಯಲ್ಲಿರುವುದು. ಅರ್ಜಿ ಸಲ್ಲಿಸುವ ದಿನಾಂಕಕ್ಕೆ ಕನಿಷ್ಠ 18 ವರ್ಷಗಳು, ಸಾಮಾನ್ಯ ಅಭ್ಯರ್ಥಿಗಳಿಗೆ ಗರಿಷ್ಠ 35 ವರ್ಷಗಳು, ಪ್ರವರ್ಗ 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳಿಗೆ- ಗರಿಷ್ಠ 38 ವರ್ಷಗಳು, ಪ.ಜಾ, ಪ.ಪಂ ಮತ್ತು ಪ್ರವರ್ಗ-1 ರ ಅಭ್ಯರ್ಥಿಗಳಿಗೆ- ಗರಿಷ್ಠ 40 ವರ್ಷಗಳು, ಅಂಗವಿಕಲ ಅಭ್ಯರ್ಥಿ ಅಥವಾ ವಿಧವೆಯಾಗಿದ್ದಲ್ಲಿ 10 ವರ್ಷಗಳು ವಯೋಮಿತಿ ಸಡಿಲಿಕೆ. (ನಿಯಮಗಳು ಅನ್ವಯ)
3. ಜಿಲ್ಲಾ ಆಯುಷ್ ಸಮಿತಿಯ ಸಂದರ್ಶನಕ್ಕೆ ಹಾಜರಾಗುವ ಮುನ್ನ ವಿದ್ಯಾರ್ಹತೆ/ಮೀಸಲಾತಿ/ವಯಸ್ಸು/ವಾಸಸ್ಥಳ/ವಾರ್ಷಿಕ ಆದಾಯ/ಸಮಿತಿಯು ಕೋರುವ ಇತರೆ ಮೂಲ ದಾಖಲೆಗಳನ್ನು ಹಾಜರುಪಡಿಸುವುದು.
4. ಕೇಂದ್ರ ಸ್ಥಾನದಲ್ಲಿ ತಂಗಿದ್ದು 24 ಗಂಟೆಗಳಲ್ಲೂ ಯಾವುದೇ ತುರ್ತು ಸೇವೆಗೆ ಲಭ್ಯವಿದ್ದು ಸೇವೆ ಸಲ್ಲಿಸುವ ಷರತ್ತಿಗೆ ಒಳಪಟ್ಟಿರಬೇಕು.
5. ತೃಪ್ತಿಕರವಾದ ಕರ್ತವ್ಯ ನಿರ್ವಹಣೆ ಷರತ್ತಿಗೆ ಒಳಪಟ್ಟು ಪ್ರತಿ ತಿಂಗಳು ಸಂಚಿತ ಮೊತ್ತವನ್ನು ಮಾತ್ರ ನೀಡಲಾಗುವುದು.
6. ಗುತ್ತಿಗೆ ಆಧಾರದ ತಾತ್ಕಾಲಿಕ ನೇಮಕಾತಿಯನ್ನು ಯಾವುದೇ ಸಮಯದಲ್ಲಿ ಕಾರಣವಿಲ್ಲದೇ ಅಥವಾ ಸರ್ಕಾರ, ಉಭಯ ಪಕ್ಷಗಳು ಒಂದು ತಿಂಗಳ ನೋಟೀಸು ಕೊಟ್ಟು ಸೇವೆಯನ್ನು ಪರ್ಯವಸನಗೊಳಿಸುವ ಷರತ್ತಿಗೊಳಪಟ್ಟಿರುತ್ತದೆ.
7. ಅಭ್ಯರ್ಥಿಗಳು ದುರ್ನಡತೆಯಿಂದಾಗಿ ಸರ್ಕಾರಕ್ಕೆ ಆರ್ಥಿಕ & ಇನ್ನಿತರೆ ನಷ್ಟ ಉಂಟಾದಲ್ಲಿ ಅದನ್ನು ಅವರುಗಳೇ ಸರ್ಕಾರಕ್ಕೆ ತುಂಬಿ ಕೊಡುವುದು.
8. ಖಾಯಂ ನೇಮಕಾತಿಗಾಗಲೀ, ವಿಶ್ರಾಂತಿ ವೇತನಕ್ಕಾಗಲೀ, ನಿವೃತ್ತಿ ಉಪದಾನಕ್ಕಾಗಲೀ, ವೇತನ ಶ್ರೇಣಿಗಾಗಲೀ ಅಥವಾ ಯಾವುದೇ ಭತ್ಯೆಗಳನ್ನು ಪಡೆಯುವ ಹಕ್ಕನ್ನು ಹೊಂದಿರುವುದಿಲ್ಲ.
9. ಗುತ್ತಿಗೆ ಆಧಾರದ ತಾತ್ಕಾಲಿಕ ನೇಮಕಾತಿಯು ನಿರ್ಧಿಷ್ಟ ಆಸ್ಪತ್ರೆಗೆ ಆಗಿರುವುದರಿಂದ ಯಾವುದೇ ಇತರೆ ಆಸ್ಪತ್ರೆಗಾಗಲೀ/ಚಿಕಿತ್ಸಾಲಯಕ್ಕಾಗಲೀ ಅಥವಾ ಬೇರೆ ಜಿಲ್ಲೆಗೆ ವರ್ಗಾವಣೆ ಅಥವಾ ಪ್ರತಿ ನಿಯೋಜನೆ ಪಡೆಯಲು ಅವಕಾಶವಿರುವುದಿಲ್ಲ.
10. ಅಪೂರ್ಣ ಅರ್ಜಿಗಳು ಹಾಗೂ ಅವಧಿ ಮೀರಿ ಬರುವ ಅರ್ಜಿಗಳನ್ನು ಯಾವುದೇ ಸೂಚನೆ ನೀಡದೇ ತಿರಸ್ಕರಿಸಲಾಗುವುದು. ಅರ್ಜಿದಾರರ ವಾಸಸ್ಥಳದ ಬಗ್ಗೆ ಸಂಬಂಧಿಸಿದ ನಗರಪಾಲಿಕೆ/ತಹಶೀಲ್ದಾರರಿಂದ ಪಡೆದ ದೃಢೀಕರಣ ಪತ್ರವನ್ನು ಕಡ್ಡಾಯವಾಗಿ ಸಲ್ಲಿಸತಕ್ಕದ್ದು.
11. ತಾತ್ಕಾಲಿಕ ನೇರ ಗುತ್ತಿಗೆ ಹುದ್ದೆಗಳು ಆಯುಷ್ ನಿರ್ದೇಶನಾಲಯವು ಕಾಲ ಕಾಲಕ್ಕೆ ಹೊರಡಿಸುವ ಆದೇಶಗಳಿಗೆ ಒಳಪಟ್ಟಿರುತ್ತದೆ.
12. ಮೇಲೆ ತಿಳಿಸಿರುವ ಹುದ್ದೆಗಳನ್ನು ಮೆರಿಟ್, ಅನುಭವ ಹಾಗೂ ಸಂದರ್ಶನದ (ಕ್ರಮವಾಗಿ 70%, 20%, 10%) ಆಧಾರದ ಮೇಲೆ ನೇಮಕ ಮಾಡಿಕೊಳ್ಳಲಾಗುವುದು.
13. ವೈದ್ಯರ ಹುದ್ದೆಗಳಿಗೆ ಪದವಿಯಲ್ಲಿ ಪಡೆದ ಅಂಕಗಳ ಆಧಾರದ ಮೇಲೆ ಮೆರಿಟ್ ಲಿಸ್ಟ್ ತಯಾರಿಸಲಾಗುವುದು.
14. ಅಭ್ಯರ್ಥಿಯು ಅರ್ಜಿಯೊಂದಿಗೆ ವಿದ್ಯಾರ್ಹತೆ/ಮೀಸಲಾತಿ/ವಯಸ್ಸು/ವಾಸಸ್ಥಳ/ವಾರ್ಷಿಕ ಆದಾಯದ (ಎರಡು ಪಾಸ್‌ಪೋರ್ಟ್ ಸೈಜಿನ ಪೋಟೊ) ಪ್ರತಿಗಳನ್ನು ಲಗತ್ತಿಸುವುದು.
15. ಭರ್ತಿ ಮಾಡಿದ ಅರ್ಜಿಗಳನ್ನು ಮುಚ್ಚಿದ ಲಕೋಟೆಯಲ್ಲಿ ಸಲ್ಲಿಸುವುದು.
16. ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ : 17-08-2023 ಮತ್ತು ಕೊನೆಯ ದಿನಾಂಕ : 16-09-2023 ರ ಸಂಜೆ 5.00 ಗಂಟೆ.

17. ಅರ್ಜಿಗಳನ್ನು **https://kolar.nic.in/en/notice_category/recruitments/** ನಲ್ಲಿ ಡೌನ್‌ಲೋಡ್ ಮಾಡಿಕೊಂಡು ಭರ್ತಿ ಮಾಡಿದ ಅರ್ಜಿಗಳನ್ನು ಜಿಲ್ಲಾ ಆಯುಷ್ ಅಧಿಕಾರಿಗಳು, ಜಿಲ್ಲಾ ಆಯುಷ್ ಕಛೇರಿ, ಎಸ್.ಎನ್.ಆರ್ ಆಸ್ಪತ್ರೆ ಆವರಣ, ಕೋಲಾರ-563101 ಇಲ್ಲಿಗೆ ಕಛೇರಿ ಅವಧಿಯಲ್ಲಿ ಖುದ್ದಾಗಿ ಅಥವಾ ನೊಂದಾಯಿತ ಅಂಚೆ ಮೂಲಕ ನಿಗದಿತ ದಿನಾಂಕದೊಳಗೆ ಸಲ್ಲಿಸತಕ್ಕದ್ದು, ನಂತರ ಸ್ವೀಕೃತಗೊಂಡ ಅರ್ಜಿಗಳನ್ನು ಪರಿಗಣಿಸುವುದಿಲ್ಲ. ಒಂದು ವೇಳೆ ಕೊನೆಯ ದಿನಾಂಕದಂದು ಸರ್ಕಾರಿ ರಜೆಯೆಂದು ಘೋಷಿಸಲ್ಪಟ್ಟಲ್ಲಿ ಮರುದಿನವನ್ನು ಅಂತಿಮ ದಿನಾಂಕವೆಂದು ಪರಿಗಣಿಸಲಾಗುತ್ತದೆ.

ಜಿಲ್ಲಾ ಆಯುಷ್ ಅಧಿಕಾರಿಗಳು,
ಕೋಲಾರ.

ಜಿಲ್ಲಾ ಆಯುಷ್ ಅಧಿಕಾರಿಗಳು
ಜಿಲ್ಲಾ ಆಯುಷ್ ಕಛೇರಿ
ಕೋಲಾರ.